**All India Radio: Bangalore**
**Regional Bulletin In Kannada**
**12.02.2025 / 6.40 p.m.**

**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

**<><><><>**

ಮುಖ್ಯಾಂಶಗಳು

1. ರಾಜ್ಯದಲ್ಲಿ ಸಣ್ಣ ಹಣಕಾಸು ಸಂಸ್ಥೆಗಳಿಗೆ ಕಡಿವಾಣ; ಸುಗ್ರೀವಾಜ್ಞೆಗೆ ರಾಜ್ಯಪಾಲರಿಂದ ಅಂಕಿತ
2. ರಾಜ್ಯದ ಆರೋಗ್ಯ ಕ್ಷೇತ್ರದಲ್ಲಿ ೮ ಸಾವಿರ ಕೋಟಿ ರೂಪಾಯಿ ಹೂಡಿಕೆಗೆ ವಿಪ್ರೊ-ಜಿಇ ಹೆಲ್ತ್ ಕೇರ್ ನಿರ್ಧಾರ
3. ಏರೋ ಇಂಡಿಯಾ ೨೦೨೫; ಹಲವು ಮಹತ್ವದ ರಕ್ಷಣಾ ಒಪ್ಪಂದಗಳಿಗೆ ಸಚಿವ ರಾಜನಾಥ್ ಸಿಂಗ್ ಸಹಿ; ನಾಳೆಯಿಂದ ಏರ್ ಶೋ ಸಾರ್ವಜನಿಕರಿಗೆ ಮುಕ್ತ
4. ಮೈಸೂರಿನ ಟಿ.ನರಸೀಪುರದ ೧೩ನೇ ಕುಂಭಮೇಳಕ್ಕೆ ಇಂದು ವಿಧ್ಯುಕ್ತ ತೆರೆ

<><><><>

ಸಣ್ಣ ಹಣಕಾಸು ಸಂಸ್ಥೆಗಳ ಸುಗ್ರೀವಾಜ್ಞೆಗೆ ಕೊನೆಗೂ ರಾಜ್ಯಪಾಲ ಥಾವರ್‌ಚಂದ್ ಗೆಹ್ಲೋಟ್ ಅಂಕಿತ ಹಾಕಿದ್ದಾರೆ. ಹಲವು ಸಲಹೆಗಳನ್ನು ನೀಡಿ ಅನುಮೋದಿಸಿರುವ ಅವರು, ಸಲಹೆಗಳ ಬಗ್ಗೆ ಅಧಿವೇಶನದಲ್ಲಿ ಚರ್ಚಿಸುವಂತೆ ಸೂಚಿಸಿದ್ದಾರೆ. ಇದರಿಂದ ಸಣ್ಣ ಹಣಕಾಸು ಸಂಸ್ಥೆಗಳ ವಿಚಾರದಲ್ಲಿ ಹೊಸ ನಿಯಮಗಳು ಜಾರಿಗೆ ಬರುವ ಸಾಧ್ಯತೆಯಿದೆ. ಮುಂದಿನ ಅಧಿವೇಶನದಲ್ಲಿ ಈ ಬಗ್ಗೆ ಚರ್ಚೆ ನಡೆಯಲಿದೆ. ಸರ್ಕಾರ ಸಣ್ಣ ಹಣಕಾಸು ಸಂಸ್ಥೆಗಳ ಕಿರುಕುಳ ತಡೆಯಲು ಸುಗ್ರೀವಾಜ್ಞೆ ಜಾರಿಗೆ ಮೊರೆ ಹೋಗಿತ್ತು. ಈ ಸುಗ್ರೀವಾಜ್ಞೆಗೆ ಅಂಕಿತ ಹಾಕಲು ನಿರಾಕರಿಸಿದ ರಾಜ್ಯಪಾಲರು ಸ್ಪಷ್ಟನೆ ಕೇಳಿ ವಾಪಸ್ ಕಳುಹಿಸಿದ್ದರು.

<><><><>

ಬೆಂಗಳೂರಿನಲ್ಲಿ ನಡೆಯುತ್ತಿರುವ ಜಾಗತಿಕ ಬಂಡವಾಳ ಹೂಡಿಕೆದಾರರ ಸಮಾವೇಶದಲ್ಲಿ ವಿವಿಧ ದೇಶಗಳ ಉದ್ಯಮಿಗಳು ರಾಜ್ಯದಲ್ಲಿ ಹೂಡಿಕೆಗೆ ಆಸಕ್ತಿ ವಹಿಸಿದ್ದಾರೆ. ಜಾಗತಿಕ ಹೂಡಿಕೆದಾರರ ಸಮಾವೇಶದಲ್ಲಿ ವೇಗದ ನಗರೀಕರಣ ವೇಳೆ ಸಂಚಾರ ಕ್ಷೇತ್ರದ ಭವಿಷ್ಯ ಕುರಿತಂತೆ ಮಾತನಾಡಿದ ಮರ್ಸಿಡಿಸ್ ಬೆನ್ಜ್ ಇಂಡಿಯಾದ ವ್ಯವಸ್ಥಾಪಕ ನಿರ್ದೇಶಕ ಸಂತೋಷ್ ಅಯ್ಯರ್,

ಸ್ವಯಂ ಚಾಲಿತ ಕಾರುಗಳು ಮುಂದಿನ ದಿನಗಳಲ್ಲಿ ಸಂಚಾರ ಕ್ಷೇತ್ರದಲ್ಲಿ ಬಹು ದೊಡ್ಡ ತಂತ್ರಜ್ಞಾನವಾಗಲಿದೆ ಎಂದು ತಿಳಿಸಿದ್ದಾರೆ. ಬೋಯಿಂಗ್‌ನ ರಾಬರ್ಟ್ ಬಾಯ್‌ಡಿ ಮಾತನಾಡಿ, ಬೆಂಗಳೂರಿನ ಬೋಯಿಂಗ್ ಕೇಂದ್ರದಲ್ಲಿ ಸುಮಾರು ೭ ಸಾವಿರ ಸಿಬ್ಬಂದಿ ಕಾರ್ಯನಿರ್ವಹಿಸುತ್ತಿದ್ದು, ವಿಶ್ವದ ಅತ್ಯುತ್ತಮ ತಂಡವಾಗಿದೆ ಎಂದು ಹೇಳಿದ್ದಾರೆ. ಉದ್ಯಮಶೀಲತೆ ಮತ್ತು ಡಿಜಿಟಲ್ ಆರ್ಥಿಕತೆ ಗೋಷ್ಠಿಯಲ್ಲಿ ಮಾತನಾಡಿದ ಹಿರಿಯ ಪತ್ರಕರ್ತ ಶೇಖರ್ ಗುಪ್ತ, ಮುಂದಿನ ಮೂರು ವರ್ಷದಲ್ಲಿ ಮಾಧ್ಯಮ ವಲಯದಲ್ಲಿ ಸಮಗ್ರ ಬದಲಾವಣೆಯಾಗಲಿದೆ ಎಂದು ಹೇಳಿದ್ದಾರೆ. ತಂತ್ರಜ್ಞಾನ ಬಳಕೆಯಿಂದ ಉದ್ಯೋಗ ಕಡಿತವಾಗಲಿದೆ ಎಂಬ ವಾದದಲ್ಲಿ ಹುರುಳಿಲ್ಲ ಎಂದು ಪ್ರತಿಪಾದಿಸಿದ್ದಾರೆ. ಭಾರತದ ಆರ್ಥಿಕ ಅಭಿವೃದ್ಧಿ ಮತ್ತು ಜಾಗತಿಕ ಸವಾಲುಗಳು ಗೋಷ್ಠಿಯಲ್ಲಿ ಮಾತನಾಡಿದ ಕೇಂದ್ರ ಯೋಜನಾ ಆಯೋಗದ ಮಾಜಿ ಉಪಾಧ್ಯಕ್ಷ, ಖ್ಯಾತ ಅರ್ಥಶಾಸ್ತ್ರಜ್ಞ ಮಾಂಟೆಕ್ ಸಿಂಗ್ ಅಹ್ಲುವಾಲಿಯಾ ಪ್ರಗತಿಯ ವೇಗ ಹೆಚ್ಚಿಸುವ ನಿಟ್ಟಿನಲ್ಲಿ ದೊಡ್ಡ ರಾಜ್ಯಗಳ ವಿಭಜನೆ ಹಾಗೂ ನಗರಗಳ ಅಭಿವೃದ್ಧಿ ಅತ್ಯಗತ್ಯ ಎಂದು ಹೇಳಿದ್ದಾರೆ. ನಿಜವಾದ ಭಾರತ ಗ್ರಾಮೀಣ ಪ್ರದೇಶದಲ್ಲಿದ್ದು, ರಾಜ್ಯ ಸರ್ಕಾರಗಳ ಬದಲು ನಗರಾಡಳಿತಕ್ಕೆ ಹೆಚ್ಚಿನ ಅಧಿಕಾರ ಸಿಗಬೇಕು ಎಂದು ಒತ್ತಿ ಹೇಳಿದ್ದಾರೆ. ಬೆಳವಣಿಗೆಗೆ ಹೂಡಿಕೆಯ ಮರುಕಲ್ಪನೆ-ಕರ್ನಾಟಕದ ಕನಸು ೨೦೨೦ ಸಾಧಿಸಲು ಪೂರಕ ೫ ವಲಯಗಳು ಗೋಷ್ಠಿಯಲ್ಲಿ ಮಾತನಾಡಿದ ಟರ್ಬೋಸ್ಟಾರ್ಟ್ ಗ್ಲೋಬಲ್ ಸಿಇಒ ವೆಂಕಟರಾಜು, ಆಯಾ ಪ್ರದೇಶಗಳ ಸಂಪನ್ಮೂಲ ಸಾಮರ್ಥ್ಯಕ್ಕೆ ಅನುಗುಣವಾಗಿ ಎರಡನೇ ಸ್ಥರದ ನಗರಗಳಲ್ಲೂ ಹೂಡಿಕೆಗೆ ಉತ್ತೇಜಿಸಿದರೆ, ಪ್ರಗತಿ ಸಾಧ್ಯವಾಗಲಿದೆ ಎಂದು ಅಭಿಪ್ರಾಯಪಟ್ಟಿದ್ದಾರೆ. "ಹಸಿರು ಇಂಧನ ಸೇರಿದಂತೆ ಅನೇಕ ಕ್ಷೇತ್ರಗಳಲ್ಲಿ ಕರ್ನಾಟಕದಲ್ಲಿ ಹೂಡಿಕೆಗೆ ಅವಕಾಶಗಳಿದ್ದು, ಸ್ವಿಟ್ಜರ್‌ಲೆಂಡ್ ಕಂಪನಿಗಳು ಆಸಕ್ತಿ ತೋರಿವೆ ಎಂದು ಉಡುಪಿ ಮೂಲದ ಸ್ವಿಟ್ಜರ್‌ಲೆಂಡ್ ಸಂಸದ ಹಾಗೂ ಸ್ವಿಜ್ ಇಂಡಿಯಾ ಪಾರ್ಲಿಮೆಂಟರಿ ಗ್ರೂಪ್ ಅಧ್ಯಕ್ಷ ಎಚ್.ಸಿ. ನಿಕ್ ಗುಗ್ಗರ್ ತಿಳಿಸಿದ್ದಾರೆ. ವಿಪ್ರೋ-ಜಿಇ ಹೆಲ್ತ್ ಕೇರ್ ಸಂಸ್ಥೆಯು ಕರ್ನಾಟಕದ ಆರೋಗ್ಯಸೇವೆಗಳ ಕ್ಷೇತ್ರದಲ್ಲಿ ಮುಂದಿನ ೫ ವರ್ಷಗಳಲ್ಲಿ ೮ ಸಾವಿರ ಕೋಟಿ ರೂಪಾಯಿ ಹೂಡಿಕೆ ಮಾಡಲಿದೆ. ಇದು ಕಳೆದ ಎರಡು ದಶಕಗಳಲ್ಲಿ ವಿನಿಯೋಗಿಸಿರುವ ೨೧ ಸಾವಿರ ಕೋಟಿ ರೂಪಾಯಿ ಬಂಡವಾಳದ ಮುಂದುವರಿದ ಭಾಗವಾಗಿದೆ ಎಂದು ಕಂಪನಿಯ ದಕ್ಷಿಣ ಏಷ್ಯಾ ವಿಭಾಗದ ಮುಖ್ಯಸ್ಥ ಚೈತನ್ಯ ಸರವಟೆ ಹೇಳಿದ್ದಾರೆ. ಭಾರತದಲ್ಲಿ ಬಾಶ್ ಕಂಪನಿಗೆ

ಬೆಂಗಳೂರೇ ಕೇಂದ್ರ ಸ್ಥಾನವೆಂದು ಸಂಸ್ಥೆಯ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಗುರು ಪ್ರಸಾದ್ ಮುದಲಾಪುರ ತಿಳಿಸಿದ್ದಾರೆ.

<><><><>

ಕರ್ನಾಟಕ ವಾಣಿಜ್ಯ ಮತ್ತು ಕೈಗಾರಿಕಾ ಮಹಾಸಂಸ್ಥೆ-ಎಫ್‌ಕೆಸಿಸಿಐ ಕೈಗಾರಿಕಾ ನೀತಿ ೨೦೨೫-೩೦ ಅನ್ನು ಅನಾವರಣಗೊಳಿಸಿದ್ದಕ್ಕಾಗಿ ರಾಜ್ಯ ಸರ್ಕಾರವನ್ನು ಶ್ಲಾಘಿಸಿದೆ. ಇದು ಆರ್ಥಿಕ ಬೆಳವಣಿಗೆ, ಉದ್ಯೋಗ ಸೃಷ್ಟಿ ಮತ್ತು ಸುಸ್ಥಿರ ಕೈಗಾರಿಕಾ ಅಭಿವೃದ್ಧಿಗೆ ಮಹತ್ವಾಕಾಂಕ್ಷೆಯ ಮಾರ್ಗಸೂಚಿಯನ್ನು ಹೊಂದಿದೆ ಎಂದು ಎಫ್‌ಕೆಸಿಸಿಐ ಅಧ್ಯಕ್ಷ ಎಂ.ಜಿ. ಬಾಲಕೃಷ್ಣ ತಿಳಿಸಿದ್ದಾರೆ. ಜಾಗತಿಕ ಬಂಡವಾಳ ಹೂಡಿಕೆದಾರರ ಸಮಾವೇಶದಲ್ಲಿ ಘೋಷಿಸಲಾದ ಈ ನೀತಿಯು ೨೦ ಲಕ್ಷ ಉದ್ಯೋಗಗಳನ್ನು ಸೃಷ್ಟಿಸುವ ನಿರೀಕ್ಷೆಯಿದೆ. ಕೆಐಎಡಿಬಿಯು ಎಲ್ಲಾ ಕೈಗಾರಿಕಾ ಪ್ರದೇಶಗಳಲ್ಲಿ ಕನಿಷ್ಠ ಶೇ ೩೦ರಷ್ಟು ಭೂಮಿಯನ್ನು ಸೂಕ್ಷ್ಮ ಮತ್ತು ಸಣ್ಣ ಕೈಗಾರಿಕೆಗಳಿಗೆ ಸರ್ಕಾರದ ಹೊಸ ನೀತಿಯಲ್ಲಿ ಮೀಸಲಿಟ್ಟಿರುವುದಕ್ಕೆ ಅವರು ಧನ್ಯವಾದ ತಿಳಿಸಿದ್ದಾರೆ.

<><><><>

ಬೆಂಗಳೂರಿನ ಯಲಹಂಕ ವಾಯುನೆಲೆಯಲ್ಲಿ ನಡೆಯುತ್ತಿರುವ ಏರೋ ಇಂಡಿಯಾ ೨೦೨೫ರ ಮೂರನೇ ದಿನವಾದ ಇಂದು ಹಲವು ಯುದ್ಧ ವಿಮಾನಗಳು ವೈಮಾನಿಕ ಪ್ರದರ್ಶನ ನಡೆಸಿದವು. ಇಂದು ರಕ್ಷಣಾ ಸಚಿವ ರಾಜನಾಥ್ ಸಿಂಗ್, ಗಾಂಬಿಯಾದ ರಕ್ಷಣಾ ಸಚಿವ ಸೆರಿಂಗ್ ಮೊಡೌವ್ ಎನ್ಜಿ ಅವರನ್ನು ಭೇಟಿಯಾದರು. ಈ ನಡುವೆ, ಗ್ಯಾಬೋನ್ ರಕ್ಷಣಾ ಸಚಿವೆ ಬ್ರಿಗಿಟ್ಟೆ ಓಂಕಾನೋವಾ ಅವರೊಂದಿಗೆ ದ್ವಿಪಕ್ಷೀಯ ರಕ್ಷಣಾ ಸಹಕಾರ ಕುರಿತಂತೆ ಚರ್ಚೆ ನಡೆಸಿದರು. ಇಥಿಯೋಪಿಯೋದ ರಕ್ಷಣಾ ಸಚಿವೆ ಆಯಿಶಾ ಮೊಹಮ್ಮದ್ ಮುಸ್ಸಾ ಹಾಗೂ ರಾಜನಾಥ್ ಸಿಂಗ್ ತಿಳುವಳಿಕಾ ಒಪ್ಪಂದಕ್ಕೆ ಸಹಿ ಹಾಕುವ ಮೂಲಕ ರಕ್ಷಣಾ ಸಂಬಂಧಗಳನ್ನು ಬಲಪಡಿಸುವ ಬದ್ಧತೆಯನ್ನು ಪುನರುಚ್ಚರಿಸಿದರು. ಸಮಾರೋಪ ಸಮಾರಂಭದಲ್ಲಿ ಮಾತನಾಡಿದ ರಕ್ಷಣಾ ಸಚಿವ ರಾಜನಾಥ್ ಸಿಂಗ್, ವಿಶ್ವದ ಪ್ರಮುಖ ವಾಯು ಪ್ರದರ್ಶನಗಳಲ್ಲಿ ಒಂದಾದ ಏರೋ ಇಂಡಿಯಾ, ನಿಮ್ಮೆಲ್ಲರ ಬೆಂಬಲದಿಂದ ಯಶಸ್ವಿಯಾಗಿರುವುದು ಐತಿಹಾಸಿಕ ಎಂದು ತಿಳಿಸಿದರು.

**ಧ್ವನಿ: ರಾಜನಾಥ್ ಸಿಂಗ್ ೩೩ ಸೆಕೆಂಡ್**

ನಾಳೆ ಮತ್ತು ನಾಡಿದ್ದು ಸಾರ್ವಜನಿಕರಿಗೆ ಏರ್ ಶೋ ವೀಕ್ಷಣೆಗೆ ಅವಕಾಶ ಮಾಡಿಕೊಡಲಾಗಿದೆ.

<><><><>

ಟಿ.ನರಸೀಪುರದಲ್ಲಿ ನಡೆಯುತ್ತಿರುವ ಕುಂಭಮೇಳಕ್ಕೆ ಆಗಮಿಸಿ ಜನರು ಪುಣ್ಯ ಸ್ಥಾನ ಮಾಡಿದ್ದಾರೆ ಎಂದು ಜಿಲ್ಲಾ ಉಸ್ತುವಾರಿ ಸಚಿವ ಡಾ. ಹೆಚ್ ಸಿ ಮಹದೇವಪ್ಪ ತಿಳಿಸಿದ್ದಾರೆ. ೧೩ ನೇ ಕುಂಭಮೇಳದ ಸಮಾರೋಪ ಸಮಾರಂಭ ಉದ್ದೇಶಿಸಿ ಮಾತನಾಡಿದ ಅವರು, ಕುಂಭಮೇಳ ಆಚರಣೆಗೆ ಮುಖ್ಯಮಂತ್ರಿಗಳು ಒಪ್ಪಿಗೆ ನೀಡಿ ಅಗತ್ಯ ಅನುದಾನ ನೀಡಿದ್ದಾರೆ. ಜಿಲ್ಲಾಡಳಿತ ವ್ಯವಸ್ಥಿತವಾಗಿ ಮೂಲಭೂತ ಸೌಲಭ್ಯಗಳನ್ನು ಕಲ್ಪಿಸಿದೆ ಎಂದು ಹೇಳಿದರು. ನದಿಗಳನ್ನು ಸ್ವಚ್ಛವಾಗಿ ಇಟ್ಟುಕೊಳ್ಳುವುದು ಸಾರ್ವಜನಿಕರ ಜವಾಬ್ದಾರಿಯಾಗಿದೆ ಎಂದು ತಿಳಿಸಿದರು. ಕಾರ್ಯಕ್ರಮದಲ್ಲಿ ನಿರ್ಮಲಾನಂದ ಮಹಾ ಸ್ವಾಮೀಜಿ, ಶಿವರಾತ್ರಿ ದೇಶಿಕೇಂದ್ರ ಸ್ವಾಮೀಜಿ ಸೇರಿದಂತೆ ವಿವಿಧ ಮಠಗಳ ಮಠಾಧೀಶರು ಉಪಸ್ಥಿತರಿದ್ದರು.

<><><><>

೧೬ನೇ ಬೆಂಗಳೂರು ಅಂತಾರಾಷ್ಟ್ರೀಯ ಚಲನಚಿತ್ರೋತ್ಸವಕ್ಕೆ ಮಾರ್ಚ್ ೧ ರಂದು ಚಾಲನೆ ದೊರೆಯಲಿದೆ. ವಿಧಾನಸೌಧದ ಮುಂಭಾಗದಲ್ಲಿ ನಡೆಯಲಿರುವ ಕಾರ್ಯಕ್ರಮವನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ಉದ್ಘಾಟಿಸಲಿದ್ದಾರೆ. ಚಿತ್ರೋತ್ಸವದಲ್ಲಿ ೬೦ ದೇಶಗಳ ಸುಮಾರು ೨೦೦ ಅತ್ಯುತ್ತಮ ಚಲನಚಿತ್ರಗಳು ಪ್ರದರ್ಶನಗೊಳ್ಳಲಿವೆ. ಬೆಂಗಳೂರಿನಲ್ಲಿ ಜಗತ್ತು ಎನ್ನುವ ಶೀರ್ಷಿಕೆಯಡಿ ಈ ಚಿತ್ರೋತ್ಸವ ನಡೆಯಲಿದೆ.

<><><><>

ರಾಜ್ಯ ಸರ್ಕಾರದ ವಿರುದ್ಧ ವಿಧಾನಸಭೆ ವಿರೋಧ ಪಕ್ಷದ ನಾಯಕ ಆರ್.ಅಶೋಕ ಹಾಗೂ ವಿಧಾನ ಪರಿಷತ್ತಿನ ಪ್ರತಿಪಕ್ಷದ ನಾಯಕ ಛಲವಾದಿ ನಾರಾಯಣಸ್ವಾಮಿ ವಿಧಾನಸೌಧದ ಮುಂದೆ ಇಂದು ಪ್ರತಿಭಟನೆ ನಡೆಸಿದರು. ಉಭಯ ಸದನಗಳ ವಿರೋಧ ಪಕ್ಷದ ನಾಯಕರು ಭಿತ್ತಿಪತ್ರ ಹಿಡಿದು ವಿನೂತನ ಮಾದರಿಯಲ್ಲಿ ಪ್ರತಿಭಟನೆ ನಡೆಸಿ, ಸರ್ಕಾರದ ನಡೆ ವಿರುದ್ಧ ಅಸಮಾಧಾನ ವ್ಯಕ್ತಪಡಿಸಿದರು. ಆರ್. ಅಶೋಕ ಮಾತನಾಡಿ, ರಾಜ್ಯದಲ್ಲಿ ನಿಷ್ಠಾವಂತ ಅಧಿಕಾರಿಗಳು ಕೆಲಸ ಮಾಡಲು ಸಾಧ್ಯವಾಗದ ಪರಿಸ್ಥಿತಿ ನಿರ್ಮಾಣವಾಗಿದೆ. ಎಂದು ಆರೋಪಿಸಿದರು. ಛಲವಾದಿ ನಾರಾಯಣಸ್ವಾಮಿ ಅಧಿಕಾರಿಗಳಿಗೆ ರಕ್ಷಣೆ ಇಲ್ಲದ ಪರಿಸ್ಥಿತಿ ನಿರ್ಮಾಣವಾಗಿದೆ ಎಂದು ತಿಳಿಸಿದರು.

<><><><>

ಭಾರತದ ಅತಿ ದೊಡ್ಡ ಸಮಗ್ರ ವಿದ್ಯುತ್ ಘಟಕ ಎನ್‌ಟಿಪಿಸಿ ಕಂಪನಿಯು ೫೦ನೇ ವರ್ಷಾಚರಣೆ ಹಿನ್ನೆಲೆಯಲ್ಲಿ ಚೆನ್ನೈನಲ್ಲಿ ಇದೇ ೧೫ ರಂದು ದಕ್ಷಿಣ ಪ್ರಾದೇಶಿಕ ಸುತ್ತಿನ ಎಲೆಕ್ಟ್ರಾನ್ ರಸಪ್ರಶ್ನೆ ೨೦೨೫ ಆಯೋಜಿಸಿದೆ. ಮೊದಲ ಬಹುಮಾನ ಗಳಿಸಿದವರಿಗೆ ೩೦ ಸಾವಿರ, ಎರಡನೇ ಸ್ಥಾನಕ್ಕೆ ೨೦ ಸಾವಿರ ಹಾಗೂ ಮೂರನೇ ಸ್ಥಾನ ಪಡೆದವರಿಗೆ ೧೦ ಸಾವಿರ ರೂಪಾಯಿ ಬಹುಮಾನ ಘೋಷಿಸಿದೆ. ಜೊತೆಗೆ ನಾಲ್ಕನೇ ಸ್ಥಾನದಿಂದ ೬ನೇ ಸ್ಥಾನ ಪಡೆದ ತಂಡಗಳಿಗೆ ೪ ಸಾವಿರ ರೂಪಾಯಿ ಸಮಾಧಾನಕರ ಬಹುಮಾನ ನೀಡಲಿದೆ. ವಿದ್ಯಾರ್ಥಿಗಳ ಪ್ರತಿಭೆಯನ್ನು ಪ್ರದರ್ಶಿಸುವ ನಿಟ್ಟಿನಲ್ಲಿ ಈ ರಸಪ್ರಶ್ನೆ ಆಯೋಜಿಸಲಾಗಿದೆ. ಪ್ರತಿ ಪ್ರದೇಶದ ಎರಡು ತಂಡಗಳು ಸೆಮಿಫೈನಲ್‌ಗೆ ಅರ್ಹತೆ ಪಡೆಯಲಿವೆ. ಸೆಮಿಫೈನಲ್‌ನಿಂದ ಅಗ್ರ ಎರಡು ತಂಡಗಳು ಫೈನಲ್‌ಗೆ ಅರ್ಹತೆ ಪಡೆಯಲಿವೆ.

<><><><>

ವಿಶ್ವ ವಿಖ್ಯಾತ ಹಂಪಿ ಉತ್ಸವವನ್ನು ಇದೇ  ೨೮ ಹಾಗೂ ಮಾರ್ಚ್ ಒಂದು ಮತ್ತು ಎರಡರಂದು ಆಚರಿಸಲು ನಿರ್ಧರಿಸಲಾಗಿದೆ. ಈ ಹಿನ್ನೆಲೆಯಲ್ಲಿ ಜಿಲ್ಲಾಧಿಕಾರಿ ಎಂ.ಎಸ್.ದಿವಾಕರ್ ಸುಮಾರು ೫ ಎಕರೆ ಜಾಗದಲ್ಲಿ ನಿರ್ಮಿಸಲಾಗುತ್ತಿರುವ ಮುಖ್ಯ ವೇದಿಕೆಯ ಸ್ಥಳಕ್ಕೆ ಭೇಟಿ ನೀಡಿ ಸಿದ್ಧತೆ ಪರಿಶೀಲನೆ ನಡೆಸಿದರು. ನಂತರ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಉತ್ಸವಕ್ಕೆ ಬಂದ ಜನರು ಹಂಪಿಯ ಜಗತ್ಪ್ರಸಿದ್ಧ ಸ್ಮಾರಕಗಳನ್ನು ವೀಕ್ಷಿಸಬೇಕು ಎನ್ನುವ ಉದ್ದೇಶದಿಂದ  ಕಳೆದ ವರ್ಷದಂತೆ ೪ ವೇದಿಕೆಗಳನ್ನು ನಿರ್ಮಾಣ ಮಾಡಲಾಗುತ್ತಿದೆ ಎಂದು ತಿಳಿಸಿದರು.

**ಧ್ವನಿ: ಎಂ.ಎಸ್.ದಿವಾಕರ್, ಜಿಲ್ಲಾಧಿಕಾರಿ  ೩೩ ಸೆಕೆಂಡ್**

<><><><>

ಸಂಕ್ಷಿಪ್ತ ಸುದ್ದಿಗಳು

1. ಸಮಾಜದಲ್ಲಿ ಜೀತ ಪದ್ಧತಿ, ಮಾನವ ಕಳ್ಳ ಸಾಗಾಣಿಕೆ ಶಿಕ್ಷಾರ್ಹ ಅಪರಾಧವಾಗಿದ್ದು, ಇವುಗಳನ್ನು ನಿರ್ಮೂಲನೆ ಮಾಡಲು ಎಲ್ಲರೂ ಪ್ರಯತ್ನಿಸಬೇಕು ಎಂದು  ಬಳ್ಳಾರಿಯ ಪ್ರಧಾನ ಜಿಲ್ಲಾ  ನ್ಯಾಯಾಧೀಶೆ ಕೆ.ಜಿ.ಶಾಂತಿ  ಹೇಳಿದ್ದಾರೆ.

<><> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <><>